**ಕರ್ನಾಟಕ ಸರ್ಕಾರ**

**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ತರೀಕೆರೆ.**

**ಸಿ.ಸಿ.ನಂ.1282/2023**

ಪಿ.ಡಬ್ಲ್ಯೂಃ 5

**ಸಿ.ಡಬ್ಲ್ಯೂಃ 8**

ಸಾಕ್ಷಿದಾರರ ಹೆಸರು : ಸಿಖಂದರ್ ಪಾಷ ಡಿ.ಎಸ್.
ತಂದೆಯ ಹೆಸರು : ಮೊಹಮದ್
ವಯಸ್ಸು : **29 ವರ್ಷ**
ಉದ್ಯೋಗ : ಪಿಎಸ್ಐ
ವಾಸಸ್ಥಳ : ಲಕ್ಕವಳ್ಳಿ

**ದಿನಾಂಕಃ 09-03-2026 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು**

**ಮುಖ್ಯ ವಿಚಾರಣೆ :** ಸಹಾಯಕ ಸರ್ಕಾರಿ ಅಭಿಯೋಜಕರವರಿಂದ

ನಾನು ದಿಃ**02.03.2023** ರಿಂದ **5-06-2025** ರವರೆಗೂ ಲಕ್ಕವಳ್ಳಿ ಪೋಲೀಸ್ ಠಾಣೆಯಲ್ಲಿ ಪಿಎಸ್ಐ ಆಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

ದಿನಾಂಕ ಏಪ್ರಿಲ್ 4, 2023 ರಂದು ಈ ಪ್ರಕರಣದ ಕಡತವನ್ನು ಮುಂದಿನ ತನಿಖೆಗಾಗಿ ಎಸ್ ರವಿ ಅವರಿಂದ ಪಡೆದುಕೊಂಡು ಈ ಪ್ರಕರಣದಲ್ಲಿ ಪ್ರತ್ಯಕ್ಷ ಸಾಕ್ಷಿದಾರರುಗಳಾದ ಸುರೇಶ್ ಮತ್ತು ವಸಂತಕುಮಾರ್ ರವರ ಹೇಳಿಕೆಗಳನ್ನು ದಾಖಲಿಸಿಕೊಂಡಿರುತ್ತೇನೆ. ಇವುಗಳನ್ನು ಕಡತಕ್ಕೆ ಅಳವಡಿಸಿಕೊಂಡಿರುತ್ತೇನೆ. ದಿನಾಂಕ, ಏಪ್ರಿಲ್ 17, 2023 ರಂದು ಈ ಪ್ರಕರಣದಲ್ಲಿ ಈಗಾಗಲೇ ಅಮಾನತುಪಡಿಸಿಕೊಂಡಿದ್ದ ಮದ್ಯವನ್ನು ಪೌಚುಗಳನ್ನು ರಾಸಾಯನಿಕ ತಜ್ಞರ ಪರೀಕ್ಷೆಗೆ ಚಿಕ್ಕಮಗಳೂರಿಗೆ ಠಾಣೆಯ ಹೆಡ್ ಕಾನ್ಸ್ಟೇಬಲ್ 168 ಶಿವಕುಮಾರ್ ರವರ ಹಸ್ತ ಕಳುಹಿಸಿಕೊಟ್ಟಿದ್ದು ಅಲ್ಲಿಂದ ನೀಡಿದ ಸ್ವೀಕೃತಿಯನ್ನು ಸ್ವೀಕರಿಸಿಕೊಂಡು ಕೇಸ್ ನ ಕಡತದಲ್ಲಿ ಅಳವಡಿಸಿಕೊಂಡಿರುತ್ತೇನೆ. ದಿನಾಂಕ ಜೂನ್ 1, 2023 ರಂದು ಈಗಾಗಲೇ ರಾಸಾಯನಿಕ ತಜ್ಞರಿಗೆ ಕಳುಹಿಸಿಕೊಟ್ಟಿದ್ದ ರಾಸಾಯನಿಕ ವರದಿಯನ್ನು ಸ್ವೀಕರಿಸಿಕೊಂಡು ಕಡತದಲ್ಲಿ ಅಳವಡಿಸಿಕೊಂಡಿರುತ್ತೇನೆ. ಅನಂತರ ದಿನಾಂಕ ಜುಲೈ 24, 2023 ರಂದು ಈ ಪ್ರಕರಣದಲ್ಲಿ ಆರೋಪಿತನಾದ ಮಂಜುನಾಥ್ ಬಿನ್ ಲೇಟ್ ರಾಮಸ್ವಾಮಿ ರವರು ಮದ್ಯವನ್ನು ಅಕ್ರಮವಾಗಿ

ಮಾರಾಟ ಮಾಡಲು ಸೂಕ್ತ ಪರವಾನಗಿ ಇಲ್ಲದೆ ಇಟ್ಟುಕೊಂಡಿರೋದು ಸಾಬೀತಾಗಿರೋದ್ರಿಂದ ಆತನ ವಿರುದ್ಧ ಕಲಂ 32 , 34 ಕರ್ನಾಟಕ ಅಬಕಾರಿ ಕಾಯ್ದೆ ಅಡಿಯಲ್ಲಿ ಆರೋಪಿಯ ವಿರುದ್ದ ದೋಷರೋಪಣಾ ಪಟ್ಟಿಯನ್ನು ತಯಾರಿಸಿ ಘನ ನ್ಯಾಯಾಲಯಕ್ಕೆ ನಿವೇದಿಸಿಕೊಂಡಿರುತ್ತೇನೆ.

ಸಾಕ್ಷಿಗೆ ಒಂದು ದಾಖಲಾತಿಯನ್ನು ತೋರಿಸಲಾಗಿದ್ದು, ಅದು ಎಫ್ ಎಸ್ ಎಲ್ ವರದಿ ಯಾಗಿದ್ದು, ಸದರಿ ದಾಖಲೆಯನ್ನು ನಿಪಿ-5 ಎಂದು, ಸಾಕ್ಷಿಯ ಸಹಿಯನ್ನು ನಿಪಿ-5(ಎ) ಎಂದು ಗುರುತಿಸಲಾಯಿತು.

**<u>ಪಾಟೀ ಸವಾಲು : ಆರೋಪಿ ಪರ ವಕೀಲರಿಂದ.</u>**

ನೀವು ಯಾವುದೇ ಪ್ರತ್ಯಕ್ಷ ಸಾಕ್ಷಿದಾರರ ಹೇಳಿಕೆಯನ್ನು ಪಡೆದುಕೊಂಡಿಲ್ಲ ಎಂದರೆ ಸರಿಯಲ್ಲ. ಅಮಾನತ್ತುಪಡಿಸಿಕೊಂಡ ಮದ್ಯದ ಪೌಚುಗಳನ್ನು ಪ್ಯಾಕ್ ಮಾಡಿದ್ದು, ಅದನ್ನು ನಾನು ನೋಡಿರುವುದಿಲ್ಲ. ಆರೋಪಿ ಯಾವುದೇ ತಪ್ಪು ಮಾಡದೇ ಇದ್ದರೂ ಸಹ ಆರೋಪಿ ಮೇಲೆ ಸುಳ್ಳು ದೋಷರೋಪಣಾ ಪಟ್ಟಿಯನ್ನು ಸಲ್ಲಿಸಿರುತ್ತಿರಾ ಎಂದರೆ ಸರಿಯಲ್ಲ.

**<u>ಮರುವಿಚಾರಣೆ</u>:** ಇರುವುದಿಲ್ಲ.

(ತೆರೆದ ನ್ಯಾಯಾಲಯದಲ್ಲಿ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು.)

ಓ. ಕೇ. ಸ. ಇ. ಎ. ಒ.

ಸಹಿ/-

1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು

**ಪ್ರ.ದ.ನ್ಯಾ.ದಂ.ರವರು,ತರೀಕೆರೆ.**